**BENGALURU SOLID WASTE MANAGEMENT LIMITED**
Reg. Office: 30/1, 1st and 2nd Floor, UNI Building, Thimmaiah Road, Millers Tank Bund Area, Vasanth Nagar, Bengaluru- 560052 CIN: U37100KA2021SGC147734
TAN: BLRB21071B PAN: AAJCB8656M Email-Id: bluruswml2021@gmail.com

ಸಂಖ್ಯೆ: ಬಿಎಸ್‌ಡಬ್ಲ್ಯೂಎಂಎಲ್/ವ್ಯ.ನಿ/ಪಿಆರ್/114/2024–25 ದಿನಾಂಕ: 9.10.24

**:ಕಛೇರಿ ಆದೇಶ:**

**ವಿಷಯ** : ಮುಂಬರುವ ದಸರ ಹಾಗೂ ದೀಪಾವಳಿ ಹಬ್ಬದ ದಿನಗಳಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯವನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ಕುರಿತು.

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಸರ ಹಾಗೂ ದೀಪಾವಳಿ ಹಬ್ಬದ ಪ್ರಯುಕ್ತ ಹೆಚ್ಚುವರಿ ತ್ಯಾಜ್ಯ ಉತ್ಪತ್ತಿಯಾಗುತ್ತದೆಂದು ಅಂದಾಜಿಸಲಾಗಿದ್ದು, ಹಬ್ಬದ ದಿನಗಳಂದು ಹಾಗೂ ನಂತರ ಘನತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಈ ಕೆಳಕಂಡಂತೆ ವಿಲೇವಾರಿ ಮಾಡಬೇಕಾಗಿರುತ್ತದೆ.

1. ಬಾಳೇಕಂದು, ಮಾವಿನ ಎಲೆ, ಹೂವು ಹಾಗೂ ಇತರೆ ಹಬ್ಬದ ವಸ್ತುಗಳನ್ನು ಮಾರಾಟ ಮಾಡುವ ವ್ಯಾಪಾರಿಗಳಿಗೆ ವಿಶೇಷವಾಗಿ ಮಾರುಕಟ್ಟೆಗಳಲ್ಲಿ ಹಸಿ ಮತ್ತು ಒಣ ತ್ಯಾಜ್ಯವನ್ನು ವಿಂಗಡಿಸಿ ನೀಡಲು ಅರಿವು ಮೂಡಿಸುವುದು.
2. ಮಾರುಕಟ್ಟೆಗಳು ಹಾಗೂ ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಹಬ್ಬದ ಸಾಮಾನುಗಳನ್ನು ಮಾರಾಟ ಮಾಡುವ ವ್ಯಾಪಾರಿಗಳು ಏಕ ಬಳಕೆ ಪ್ಲಾಸ್ಟಿಕ್‌ಗಳನ್ನು ಬಳಸದಂತೆ ನಿಗಾವಹಿಸಲು ವಾರ್ಡ್‌ಗಳಲ್ಲಿ ಘನತ್ಯಾಜ್ಯ ಆರೋಗ್ಯ ಅಧಿಕಾರಿಗಳ ಮತ್ತು ಮಾರ್ಷಲ್‌ಗಳು ತಂಡಗಳನ್ನು ರಚಿಸಿಕೊಂಡು ದಿನಂಪ್ರತಿ ಪರಿವೀಕ್ಷಣೆ ಕೈಗೊಂಡು ಪ್ಲಾಸ್ಟಿಕ್ ಮಾರಾಟ / ಬಳಕೆದಾರರಿಗೆ ನಿಯಮಾನುಸಾರ ದಂಡ ವಿಧಿಸಿ ಪ್ಲಾಸ್ಟಿಕ್‌ನ್ನು ವಶಪಡಿಸಿಕೊಂಡು ಮರುಬಳಕೆಯಾಗದಂತೆ ಅಗತ್ಯ ಕ್ರಮವಹಿಸುವುದು.
3. ದಸರ ಹಾಗೂ ದೀಪಾವಳಿ ಹಬ್ಬದ ಪ್ರಯುಕ್ತ ಉತ್ಪತ್ತಿಯಾಗುವ ಹೆಚ್ಚುವರಿ ತ್ಯಾಜ್ಯವನ್ನು ಅಂದಾಜಿಸಿ, ಸದರಿ ತ್ಯಾಜ್ಯವನ್ನು ಸಂಪೂರ್ಣವಾಗಿ ಸಂಗ್ರಹಿಸಿ, ವಿಂಗಡಿಸಿ, ವಿಲೇವಾರಿ ಮಾಡಲು ಅಗತ್ಯ ಕ್ರಮ ವಹಿಸುವುದು.
4. ಬ್ಲಾಕ್‌ಸ್ಪಾಟ್‌ಗಳಲ್ಲಿ ತ್ಯಾಜ್ಯ ಶೇಖರಣೆಗೊಂಡು ಸಾರ್ವಜನಿಕರಿಗೆ ತೊಂದರೆಯಾಗದಂತೆ ವಿಶೇಷ ಗಮನ ಹರಿಸುವುದು ಹಾಗೂ ಮಾರುಕಟ್ಟೆಗಳು ಮತ್ತು ಇತರೆ ಸಾರ್ವಜನಿಕ ಸ್ಥಳಗಳಲ್ಲಿ ನಿರ್ಮಾಣವಾಗುವ ಬ್ಲಾಕ್ ಸ್ಪಾಟ್‌ಗಳನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಲು ಕ್ರಮವಹಿಸುವುದು. ಸದರಿ ಕ್ರಮವನ್ನು ಆಯಾ ದಿನದಲ್ಲಿಯೇ ಸಂಪೂರ್ಣಗೊಳಿಸುವುದು.
5. ಹಬ್ಬದ ಪ್ರಯುಕ್ತ ಮಾರುಕಟ್ಟೆಗಳು ಹಾಗೂ ಇತರೆ ಪ್ರದೇಶಗಳಲ್ಲಿ ಬಾಳೇಕಂದು, ಮಾವಿನ ಎಲೆ, ಹೂವು ಮತ್ತು ಇತರೆ ಹಸಿ ತ್ಯಾಜ್ಯವನ್ನು ಆಧ್ಯತೆ ಮೇರೆಗೆ ವಾರ್ಡ್‌ಗಳಲ್ಲಿಯೇ ಹಸಿ/ತೋಟಗಾರಿಕೆ ತ್ಯಾಜ್ಯ ಸಂಸ್ಕರಣಾ ಸೌಲಭ್ಯಗಳನ್ನು ಕಲ್ಪಿಸಿಕೊಂಡು ವಿಲೇವಾರಿ ಮಾಡುವುದು ಅಥವಾ ವಾರ್ಡ್‌ಗಳಲ್ಲಿ ವಿಕೇಂದ್ರೀಕೃತ ಹಸಿ ತ್ಯಾಜ್ಯ ಸಂಸ್ಕರಣಾ ಘಟಕಗಳಿದ್ದಲ್ಲಿ ಅಲ್ಲಿಗೆ ವಿಲೇವಾರಿ ಮಾಡುವುದು.

6. ಹಬ್ಬದ ದಿನಗಳಂದು ಉತ್ಪತ್ತಿಯಾಗುವ ಬಾಳೇಕಂದು, ಮಾವಿನ ಎಲೆ ಹಾಗೂ ಇತರೆ ಹಸಿರು ತ್ಯಾಜ್ಯವನ್ನು ಹಸಿತ್ಯಾಜ್ಯ ಸಂಸ್ಕರಣಾ ಘಟಕಗಳಲ್ಲಿ ಇರುವ ಶ್ರೆಡ್ಡರ್‌ಗಳಿಗೆ ವಿಲೇವಾರಿ ಮಾಡುವುದು.
7. ಸದರಿ ಹಬ್ಬದ ದಿನಗಳಲ್ಲಿಯೂ ಸಹ ಎಲ್ಲಾ ಸಂಸ್ಕರಣಾ ಘಟಕಗಳು ಹಾಗೂ ಭೂಭರ್ತಿ ಘಟಕಗಳು ವಾರ್ಡ್‌ಗಳಿಂದ ಸ್ವೀಕರಿಸುವ ಹೆಚ್ಚುವರಿ ತ್ಯಾಜ್ಯವನ್ನು ಪರಿಶೀಲಿಸಿ ಘಟಕಗಳಿಗೆ ಸಂಬಂಧಿಸಿದ ತ್ಯಾಜ್ಯವನ್ನು ಸಂಪೂರ್ಣವಾಗಿ ಸಂಸ್ಕರಿಸಲು/ ವಿಲೇವಾರಿ ಮಾಡಲು ಸಿದ್ಧತೆಗಳನ್ನು ಮಾಡಿಕೊಳ್ಳುವುದು.

ಮೇಲಿನ ನಿರ್ದೇಶನಗಳನ್ನು ಕಟ್ಟುನಿಟಾಗಿ ಪಾಲಿಸಿ ದಸರ ಹಾಗೂ ದೀಪಾವಳಿ ಹಬ್ಬದ ದಿನಗಳಂದು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮವಹಿಸಲು ಸೂಚಿಸಿದೆ.

ಮುಖ್ಯ ಆಯುಕ್ತರು,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ &
ವ್ಯವಸ್ಥಾಪಕ ನಿರ್ದೇಶಕರು
ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತ

ಪ್ರತಿಗಳು:
1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಮತ್ತು ಆಡಳಿತಗಾರರು, ಬಿಬಿಎಂಪಿ ಹಾಗೂ ಅಧ್ಯಕ್ಷರು, ಬಿಎಸ್‌ಡಬ್ಲ್ಯೂಎಂಎಲ್ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ, ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಯಮಿತ ರವರ ಮಾಹಿತಿಗಾಗಿ ಸಲ್ಲಿಸಿದೆ.
3. ವಿಶೇಷ ಆಯುಕ್ತರು (ಆರೋಗ್ಯ ಮತ್ತು ನೈರ್ಮಲ್ಯ), ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಎಲ್ಲಾ ವಲಯ ಆಯುಕ್ತರು, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಎಲ್ಲಾ ಜಂಟಿ ಆಯುಕ್ತರು, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಜಂಟಿ ಆಯುಕ್ತರು (ಆರೋಗ್ಯ ಮತ್ತು ನೈರ್ಮಲ್ಯ), ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಮುಖ್ಯ ಕಾರ್ಯಚರಣಾಧಿಕಾರಿ, ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಯಮಿತ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಮುಖ್ಯ ಅಭಿಯಂತರರು & ಮುಖ್ಯ ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ), ಬಿಎಸ್‌ಡಬ್ಲ್ಯೂಎಮ್‌ಎಲ್ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ಉಪ ಪ್ರಧಾನ ವ್ಯವಸ್ಥಾಪಕರು-1,2,3,4&5 ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಯಮಿತ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
10. ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ ಹಾಗೂ ಸಹಾಯಕ ಪ್ರಧಾನ ವ್ಯವಸ್ಥಾಪಕರು, ಬಿಎಸ್‌ಡಬ್ಲ್ಯೂಎಂಎಲ್ ರವರ ಅಗತ್ಯ ಕ್ರಮಕ್ಕಾಗಿ.
11. ಸಹಾಯಕ ವ್ಯವಸ್ಥಾಪಕರು ಮತ್ತು ಘಟಕ ವ್ಯವಸ್ಥಾಪಕರು, ಬಿಎಸ್‌ಡಬ್ಲ್ಯೂಎಂಎಲ್ ರವರ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12. ಕಛೇರಿ ಪ್ರತಿ.